MAY 24,2025
ALL INDIA RADIO- DHARWAD
PRADESH SAMACHARA (KANNADA) 12PM

<><><>

ಆಕಾಶವಾಣಿ

ಪ್ರದೇಶ ಸಮಾಚಾರ

<><><>

ಉತ್ತರಕನ್ನಡ ಜಿಲ್ಲೆ, ಅಂಕೋಲಾ ತಾಲೂಕಿನ ಶಿರೂರು ಗ್ರಾಮದ, ರಾಷ್ಟ್ರೀಯ ಹೆದ್ದಾರಿ 66 ರಲ್ಲಿ, ಕಳೆದ ವರ್ಷ, ಗುಡ್ಡ ಕುಸಿತದಿಂದ, ದುರ್ಘಟನೆ ಸಂಭವಿಸಿದ ಹಿನ್ನೆಲೆ, ಈ ಸ್ಥಳವನ್ನು, ಭೂ ಕುಸಿತದ ಸೂಕ್ಷ್ಮ ಪ್ರದೇಶ ಎಂದು, ಜಿಲ್ಲಾಧಿಕಾರಿ ಕೆ.ಲಕ್ಷ್ಮೀಪ್ರಿಯಾ, ಪ್ರತಿಬಂಧಕಾಜ್ಞೆ ಹೊರಡಿಸಿದ್ದಾರೆ. ಹವಾಮಾನ ಇಲಾಖೆ ರೆಡ್ ಅಲರ್ಟ ಘೋಷಿಸಿದ ಹಿನ್ನೆಲೆ, ಗಂಗಾವಳಿ ನದಿ ವ್ಯಾಪ್ತಿ ಪ್ರದೇಶವನ್ನು, ಆಪಾಯಕಾರಿ ವಲಯವೆಂದು, ವಿಪತ್ತು ನಿರ್ವಹಣಾ ಕಾಯ್ದೆ 2005 ರ ಅಡಿ, ಘೋಷಿಸಲಾಗಿದೆ.

<><><>

ಕಾರವಾರದಲ್ಲಿ ನೆರೆ ಹಾವಳಿ ಪೂರ್ವ ಸಿದ್ಧತಾ ಸಭೆ ನಡೆಸಿದ, ಜಿಲ್ಲಾ ಉಸ್ತುವಾರಿ ಸಚಿವ ಮಂಕಾಳ ವೈದ್ಯ ಅವರು, ಪ್ರಸಕ್ತ ಮುಂಗಾರು ಅವಧಿಯಲ್ಲಿ, ಯಾವುದೇ ಜೀವ ಹಾನಿ ಆಗದಂತೆ, ಅಗತ್ಯ ಮುನ್ನೆಚ್ಚರಿಕೆ ಕ್ರಮ ಕೈಗೊಳ್ಳಲು, ವಿಪತ್ತು ನಿರ್ವಹಣಾ ತುರ್ತು ಕಾರ್ಯಪಡೆ, ಸನ್ನದ್ಧ ಸ್ಥಿತಿಯಲ್ಲಿರಬೇಕು ಎಂದು, ಜಿಲ್ಲಾಡಳಿತಕ್ಕೆ ಸೂಚಿಸಿದರು.

<><><>

ಧಾರವಾಡ ಜಿಲ್ಲೆಯಾದ್ಯಂತ ಮುಂದಿನ ನಾಲ್ಕು ದಿನಗಳ ಕಾಲ ಭಾರಿ ಮಳೆ ಗಾಳಿ ಬೀಸುವ ಸಾಧ್ಯತೆಯಿದ್ದು, ಮುಂಜಾಗ್ರತಾ ಕ್ರಮವಾಗಿ ಈ ತಿಂಗಳ 28 ರವರೆಗೆ ಆರೆಂಜ್ ಅಲರ್ಟ್ ಘೋಷಿಸಲಾಗಿದೆ. ಬೆಣ್ಣಿಹಳ್ಳ ಹಾಗೂ ತುಪ್ಪರಿಹಳ್ಳ ಅಚ್ಚುಕಟ್ಟು ಪ್ರದೇಶದಲ್ಲಿರುವ, 56 ಹಳ್ಳಿಗಳು ಪ್ರವಾಹ ಸಂದರ್ಭ ಅಪಾಯಕಾರಿ ಎಂದು ಗುರುತಿಸಲಾಗಿದ್ದು, ನೆರೆ ಸಂದರ್ಭ ಹಳ್ಳಿ ಜನರನ್ನು ಸುರಕ್ಷಿತ ಸ್ಥಳಕ್ಕೆ ಸ್ಥಳಾಂತರಿಸಲು ಕ್ರಮ ಕೈಗೊಳ್ಳಲಾಗಿದೆ ಎಂದು, ಪ್ರದೇಶ ಸಮಾಚಾರಕ್ಕಾಗಿ ಹೆಚ್ಚಿನ ಮಾಹಿತಿ ನೀಡಿದ್ದಾರೆ ಜಿಲ್ಲಾಧಿಕಾರಿ ದಿವ್ಯಾ ಪ್ರಭು ಅವರು...

<><><>

ಧ್ವನಿ: ದಿವ್ಯಾ ಪ್ರಭು 37 ಸೆಕೆಂದುಗಳು

<><><>

ಇಂಜಿನಿಯರಿಂಗ್ ಸೇರಿದಂತೆ ವಿವಿಧ ವೃತ್ತಿಪರ ಶಿಕ್ಷಣ ಕೋರ್ಸ್ ಪ್ರವೇಶಾತಿಗಾಗಿ, ಕರ್ನಾಟಕ ಪರೀಕ್ಷಾ ಪ್ರಾಧಿಕಾರ ಕಳೆದ ತಿಂಗಳು ನಡೆಸಿದ, ಸಿ ಇ ಟಿ ಪರೀಕ್ಷೆ ಫಲಿತಾಂಶ ಇಂದು ಮಧ್ಯಾಹ್ನ 2 ಗಂಟೆ 30 ನಿಮಿಷಕ್ಕೆ ಪ್ರಕಟವಾಗಲಿದೆ. ಬೆಂಗಳೂರಿನ ಕೆಇಎ ಕಚೇರಿಯಲ್ಲಿ ಸುದ್ದಿಗೋಷ್ಠಿ ನಡೆಸಲಿರುವ, ಉನ್ನತ ಶಿಕ್ಷಣ ಖಾತೆ ಸಚಿವ ಡಾಕ್ಟರ ಎಂ. ಸಿ. ಸುಧಾಕರ್ ಸಿ ಇ ಟಿ ಫಲಿತಾಂಶ ಪ್ರಕಟಿಸಲಿದ್ದು, ಪರೀಕ್ಷೆಯಲ್ಲಿ, ರ್‍ಯಾಂಕ್ ಪಡೆದ ಅಭ್ಯರ್ಥಿಗಳ ಬಗ್ಗೆ ಮಾಹಿತಿ ನೀಡಲಿದ್ದಾರೆ.

<><><>

ಸರಕಾರಿ ಶಾಲೆಗಳ ಶಿಕ್ಷಕರ ಕೊರತೆ ನೀಗಿಸಲು ರಾಜ್ಯ ಸರ್ಕಾರ 51 ಸಾವಿರ ಅತಿಥಿ ಶಿಕ್ಷಕರ ನೇಮಕಕ್ಕೆ ಮುಂದಾಗಿದೆ. ಇದರಲ್ಲಿ 40 ಸಾವಿರ ಪ್ರಾಥಮಿಕ ಹಾಗೂ 11 ಸಾವಿರ ಪ್ರೌಢ ಶಾಲಾ ಶಿಕ್ಷಕರ ಹುದ್ದೆಗಳು ಸೇರಿವೆ ಎಂದು ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಸಚಿವ ಮಧು ಬಂಗಾರಪ್ಪ ಹೇಳಿದರು. ಬೆಂಗಳೂರಿನಲ್ಲಿ ಸುದ್ದಿಗೋಷ್ಠಿ ಉದ್ದೇಶಿಸಿ ಮಾತನಾಡಿದ ಅವರು ಈ ತಿಂಗಳ 29 ರಿಂದ ಶಾಲೆಗಳು ಆರಂಭವಾಗಲಿರುವ ಹಿನ್ನೆಲೆ, ಶೈಕ್ಷಣಿಕ ಚಟುವಟಿಕೆಗಳು ನಿರಂತರವಾಗಿ ಹಾಗೂ ಸಮಯಕ್ಕೆ ಸರಿಯಾಗಿ ಆರಂಭವಾಗಲಿ ಎಂಬ ಉದ್ದೇಶದಿಂದ ನೇಮಕಾತಿ ಆದೇಶ ಹೊರಡಿಸಲಾಗಿದೆ ಎಂದರು.

<><><>

ಧಾರವಾಡ ಕರ್ನಾಟಕ ಮಹಾವಿದ್ಯಾಲಯದ ಸೃಜನಾ ರಂಗಮಂದಿರದಲ್ಲಿ, ನಾಳೆ ಸಂಜೆ ಐದು ಗಂಟೆಗೆ, ಶಾಂತಲಾ ನೃತ್ಯಾಲಯದ 9 ನೇ ವಾರ್ಷಿಕೋತ್ಸವದ ಅಂಗವಾಗಿ 'ಶಾಂತಲಾ ನೃತ್ಯೋತ್ಸವ' ಭರತನಾಟ್ಯ ಕಾರ್ಯಕ್ರಮ ಆಯೋಜಿಸಲಾಗಿದೆ. ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಕುಮಾರ ಬೆಕ್ಕೇರಿ ಅವರು ಕಾರ್ಯಕ್ರಮ ಉದ್ಘಾಟಿಸಲಿದ್ದಾರೆ.

<><><>

ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು, ನಾಳೆ ಬೆಳಗ್ಗೆ 11 ಗಂಟೆಗೆ, ಆಕಾಶವಾಣಿಯ ಮನ್ ಕಿ ಬಾತ್ ಕಾರ್ಯಕ್ರಮದಲ್ಲಿ, ದೇಶ ಬಾಂಧವರೊಂದಿಗೆ, ತಮ್ಮ ಆಲೋಚನೆಗಳನ್ನು ಹಂಚಿಕೊಳ್ಳಲಿದ್ದಾರೆ. ಇದು ಮನದ ಮಾತಿನ 122ನೇ ಸಂಚಿಕೆಯಾಗಲಿದೆ.

<><><>

ಅಂಚೆ ಇಲಾಖೆ, ಚಿಕ್ಕಮಗಳೂರಿನ ಕಾಫಿ ತೋಟಗಳ ಚಿತ್ರ ಸಹಿತ, ಅಂಚೆ ಮೊಹರನ್ನು ಬಿಡುಗಡೆಗೊಳಿಸಿದೆ. ಚಿಕ್ಕಮಗಳೂರು ನಗರದ ಪ್ರಧಾನ ಅಂಚೆ ಕಚೇರಿಯ, ಅಧೀಕ್ಷಕ ಎನ್.ಬಿ.ಶ್ರೀನಾಥ್ ವಿಶೇಷ ಮೊಹರನ್ನು ಅನಾವರಣ ಗೊಳಿಸಿದರು.

<><><>

ದಾವಣಗೆರೆ ಜಿಲ್ಲೆಯಲ್ಲಿ, ಪರಿಶಿಷ್ಟ ಜಾತಿ ಸಮುದಾಯಗಳ ಗಣತಿ ಕಾರ್ಯದಲ್ಲಿ, 100 ರಷ್ಟು ಗುರಿ ಸಾಧಿಸಿ, ರಾಜ್ಯದಲ್ಲಿಯೇ ಮೊದಲ ಜಿಲ್ಲೆ ಎಂಬ ಹೆಗ್ಗಳಿಕೆಗೆ ಪಾತ್ರವಾಗಿದೆ ಎಂದು, ಜಿಲ್ಲಾಧಿಕಾರಿ ಗಂಗಾಧರ ಸ್ವಾಮಿ ಹೇಳಿದ್ದಾರೆ. ಜಿಲ್ಲಾಡಳಿತ ಭವನದಲ್ಲಿ ಮಾಹಿತಿ ನೀಡಿದ ಅವರು, 2011 ರ ಜನ ಗಣತಿ ಪ್ರಕಾರ, ಜಿಲ್ಲೆಯಲ್ಲಿ ಪರಿಶಿಷ್ಟ ಸಮುದಾಯದ ಜನಸಂಖ್ಯೆ 3 ಲಕ್ಷದ 18 ಸಾವಿರದ 315 ಇತ್ತು. ಈಗ 3 ಲಕ್ಷ 29 ಸಾವಿರದ 64 ಎಂದು ದಾಖಲಾಗಿದೆ, ಎಂದರು.

<><><>

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.

<><><>

ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ, ಮಧ್ಯಾಹ್ನ 1 ಗಂಟೆ 10 ನಿಮಿಷಕ್ಕೆ.

<><><>